ಶಿವಗಂಗೆಯನ್ನು ಪ್ರವಾಸಿಗರ ಕೇಂದ್ರವನ್ನಾಗಿ ಮಾಡಲು ಕೈಗೊಂಡ ಕ್ರಮ

1085 (1461) ಶ್ರೀ ಆಂಜನಮೂರ್ತಿ (ನೆಲಮಂಗಲ) : ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) 1990-91ನೇ ಸಾಲಿನಲ್ಲಿ ನೆಲಮಂಗಲ ತಾಲ್ಲೂಕು. ಸೋಂಪುರ ಹೋಬಳಿಗೆ ಸೇರಿದ ಶಿವಗಂಗೆಯನ್ನು ಮತ್ತು ದೊಡ್ಡಬಳ್ಳಾಪುರ ತಾಲ್ಲೂಕು ಮದುರೆ ಹೋಬಳಿ ಕನಸವಾಡಿಯಲ್ಲಿರುವ ಶ್ರೀ ಶನಿಮಹಾತ್ಮ ದೇವಸ್ಥಾನವನ್ನು ಪ್ರವಾಸಿಗರ ಕೇಂದ್ರವನ್ನಾಗಿ ಮಾಡಬೇಕೆಂದು ಸೂಚನೆ ಬಂದಿರುವುದು ನಿಜವೇ ?

2) ಹಾಗಿದ್ದಲ್ಲಿ ಸರಕಾರ ಈ ಬಗ್ಗೆ ಕೈಗೊಂಡ ಕ್ರಮವೇನು?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು) :

1) ಹೌದು

2) ಶಿವಗಂಗೆ ಕ್ಷೇತ್ರ ಹಾಗೂ ಕನಸವಾಡಿಯನ್ನು ಪ್ರೇಕ್ಷಣೀಯ ಸ್ಥಳವೆಂದು ಸರ್ಕಾರ ಗುರುತಿಸಿದೆ.

ಪ್ರವಾಸೋದ್ಯಮ ಇಲಾಖೆಗೆ ಒದಗಿಸಲಾಗುವ ಅನುದಾನದ ಅವಲಂಬನೆ ಮೇಲೆ ಪ್ರೇಕ್ಷಣೀಯ ಸ್ಥಳಗಳಲ್ಲಿ ಹಂತ ಹಂತವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು.

ಯಾದಗಿರಿ ಕ್ಷೇತ್ರದಲ್ಲಿ ಕುಡಿಯುವ ನೀರಿಗೆ ತೊಂದರೆಗೊಳಗಾಗಿರುವ ಹಳ್ಳಿಗಳು.

1089 (1866) ಶ್ರೀ ಎ. ಬಿ. ಮಲಕರೆಡ್ಡಿ (ಯಾದಗಿರಿ) ಮಾನ್ಯ ಗ್ರಾಮಾಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಯಾದಗಿರಿ ಕ್ಷೇತ್ರದಲ್ಲಿ ಎಷ್ಟು ಹಳ್ಳಿಗಳು ಕುಡಿಯುವ ನೀರಿನ ಅಭಾವ ಹೊಂದಿದೆ?

2) ಹಾಗಿದ್ದಲ್ಲಿ ಕುಡಿಯುವ ನೀರಿನ ಅಭಾವ ನೀಗಿಸಲು ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮಾಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

1) 9 ಹಳ್ಳಿಗಳು : ಜನವಸತಿಗಳು

2) ಹೆಚ್ಚುವರಿ ಕೊಳವೆ ಬಾವಿಗಳನ್ನು ಬರಪೀಡಿತ ಗ್ರಾಮಗಳಲ್ಲಿ : ಜನವಸತಿಗಳಲ್ಲಿ ಕೊರೆಯಲು ಬರಪರಿಹಾರದ ಕಾರ್ಯಕ್ರಮದ ಅಡಿಯಲ್ಲಿ ಕ್ರಮ ತೆಗೆದುಕೊಳ್ಳಲಾಗಿದೆ.

ಮೇಹುಂಡಿ ಹಳ್ಳದ ಪ್ರವಾಹದಿಂದ ರಸ್ತೆ ಸಂಚಾರ ಬಂದ್.

1090 (1613) ಶ್ರೀ ಕೆ. ಪೆಚ್ . ಕುರಡಗಿ (ಮುಂಡರಗಿ) : ಮಾನ್ಯ ಲೋಕೋಪಯೋಗಿ ಇಲಾಖೆಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಂಡರಗಿ ತಾಲ್ಲೂಕಿನಲ್ಲಿ ಮೇಹಂಡಿ ಗ್ರಾಮದ ಹಳ್ಳ ತುಂಬಿ ಹರಿಯುವುದರಿಂದ ಗದಗ ಮತ್ತು ಮುಂಡರಗಿಯ ಸಂಪರ್ಕ ಇಲ್ಲದೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ ಅದರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

ಇ) ಮುಂಡರಗಿಯಿಂದ ಅಮ್ಮಿಗಿ ರಸ್ತೆ ಪೂರ್ಣ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂದಿದ್ದರೆ ಅದರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

ಉ) ಜಿಲ್ಲಾ ಪರಿಷತ್ತಿನ ರಸ್ತೆಗಳು ಪಿ.ಡಬ್ಲ್ಯೂ.ಡಿ.ಗೆ ತೆಗೆದುಕೊಳ್ಳುವ ವಿಚಾರ ಸರ್ಕಾರದ ಗಮನದಲ್ಲಿದೆಯೇ ;

ಊ) ಇದ್ದಲ್ಲಿ ಪ್ರತಿ ತಾಲ್ಲೂಕಿನಿಂದ ಕನಿಷ್ಟ ಒಂದು ನೂರು ಕಿ.ಮೀ. ತೆಗೆದುಕೊಳ್ಳುವ ವಿಚಾರವಿದೆಯೇ ?

ಶ್ರೀ ಜಿ.ಪಿಚ್. ಅಶ್ವತ್ಥ್‌ರೆಡ್ಡಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ

ಆ) ಈ ತೊಂದರೆಯನ್ನು ನಿವಾರಿಸಲು ಸೇತುವೆಯ ಅಗತ್ಯ ಇದೆ. ಇದನ್ನು ಆಯವ್ಯಯದಲ್ಲಿ ಸೇರಿಸಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಪರಿಶೀಲಿಸಲಾಗುವುದು.

ಇ) ಬಂದಿದೆ

ಈ) ಈ ರಸ್ತೆಯ 3 ಕಿ. ಮೀ.ಗಳ ಸುಧಾರಣೆಯನ್ನು 1990-91 ನೇ ಸಾಲಿನಲ್ಲಿ ಪ್ರತಿ ವಿಧಾನ ಸಭಾಕ್ಷೇತ್ರಕ್ಕೆ ನೀಡಲಾದ 12 ಲಕ್ಷ ರೂ.ಗಳ ಅನುದಾನದಲ್ಲಿ ತೆಗೆದುಕೊಳ್ಳಲಾಗಿದೆ. ಉಳಿದ ರಸ್ತೆಯನ್ನು ಹಂತ ಹಂತವಾಗಿ ಯೋಜನೇತರ ಕಾಮಗಾರಿಗಳಲ್ಲಿ ಅನುದಾನಕ್ಕನುಗುಣವಾಗಿ ಸುಧಾರಣೆ ಮಾಡಲಾಗುವುದು.

ಉ) ಇದೆ

ಊ) ಇಲ್ಲ, ಆದರೆ ಪ್ರತಿ ವಿಧಾನ ಸಭಾ ಕ್ಷೇತ್ರದಿಂದ ಕನಿಷ್ಠ 50 ಕಿ.ಮೀ. ರಸ್ತೆಯನ್ನು ತೆಗೆದುಕೊಳ್ಳಲು ಸರ್ಕಾರ ಅನುಮತಿ ನೀಡಲಾಗಿದೆ.

ಬೆಂಗಳೂರಿನಲ್ಲಿ ಹೊಸ ಆಧುನಿಕ ವಿಮಾನ ನಿಲ್ದಾಣ

1091 (1654) ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರಿನಲ್ಲಿ ಹೊಸ ಆಧುನಿಕ ವಿಮಾನ ನಿಲ್ದಾಣಕ್ಕಾಗಿ ಬದಲಿ ಸ್ಥಳವನ್ನು ಗುರುತಿಸಲು ಕೇಂದ್ರ ಸರ್ಕಾರದಿಂದ ರಚಿಸಲಾದ ಸಮಿತಿಯು ಬೆಂಗಳೂರಿಗೆ ಭೇಟಿ ನೀಡಿತ್ತೆ ;

ಆ) ಹಾಗಿದ್ದಲ್ಲಿ ಬದಲಿ ಸ್ಥಳವನ್ನು ಎಲ್ಲಿ ಗುರುತಿಸಲಾಗಿದೆ ;